ಕ್ರ.ಸ. 34

# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಠೊಡ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ

---

**ವಿಷಯ**

ರಾಜ್ಯದ ಬೆಳಗಾವಿ ಜಿಲ್ಲೆಯಲ್ಲಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವನ್ನು ವಿಭಜಿಸಿ, ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿ ಹೊಸದಾಗಿ ವಿಶ್ವವಿದ್ಯಾಲಯವನ್ನು ಆರಂಭ ಮಾಡುವ ಆದೇಶವನ್ನು ಸರ್ಕಾರ ಹೊರಡಿಸಿದೆ. ಆದರೆ, ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ 130ಕ್ಕೂ ಹೆಚ್ಚು ಪದವಿ ಕಾಲೇಜುಗಳು ಇನ್ನೂ ದೂರದ ಬೆಳಗಾವಿಯಲ್ಲಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿಯೇ ಮುಂದುವರೆದಿವೆ. ಈ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರುಗಳು ಪ್ರತಿಯೊಂದು ವಿಷಯಕ್ಕೂ (ಅಂಕಪಟ್ಟಿ ಮೈಗ್ರೇಶನ್ ಪ್ರಮಾಣಪ್ರತ, ಘಟಿಕೋತ್ಸವ ಪ್ರಮಾಣ ಪತ್ರ ಹಾಗೂ ಇನ್ನಿತರ ಕಚೇರಿ ಕೆಲಸ ಕಾರ್ಯಗಳಿಗಾಗಿ) ಸುಮಾರು 200 ರಿಂದ 300 ಕಿ.ಮೀ ನಷ್ಟು ದೂರ ಹೋಗಿ ಅಲ್ಲಿಯೇ ಪಡೆಯಬೇಕಾದ ಪರಿಸ್ಥಿತಿ ಇದೆ. ಇದರಿಂದ ಸಾವಿರಾರು ವಿದ್ಯಾರ್ಥಿಗಳು ಪ್ರತಿನಿತ್ಯ ನೂರಾರು ಕಿ.ಮೀ ನಷ್ಟು ಪ್ರಯಾಣ ಮಾಡಬೇಕಾಗಿರುತ್ತದೆ.

ಪ್ರಸ್ತುತ ಬೆಳಗಾವಿ ಜಿಲ್ಲೆಯಲ್ಲಿರುವ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ನಗರದ ಹೊರವಲಯದಲ್ಲಿದ್ದು, ವಿದ್ಯಾರ್ಥಿಗಳಿಗೆ ಅಷ್ಟೇ ಅಲ್ಲದೇ ಪ್ರಾಧ್ಯಾಪಕರಿಗೂ ಸಹ ಸಾರಿಗೆ ಸೌಲಭ್ಯ ಸರಿಯಾಗಿ ಇಲ್ಲದೇ ಪ್ರತಿದಿನ ಕಷ್ಟವನ್ನು ಅನುಭವಿಸಬೇಕಾಗಿರುತ್ತದೆ.

ಆದ್ದರಿಂದ, ವಿಜಯಪುರ ಜಿಲ್ಲೆಯಲ್ಲಿ 130ಕ್ಕೂ ಹೆಚ್ಚು ಪದವಿ ಕಾಲೇಜುಗಳಿದ್ದು, ಇಲ್ಲಿ ಒಂದು ಹೊಸ ವಿಶ್ವವಿದ್ಯಾಲಯದ ಸ್ಥಾಪಿಸುವ ಅವಶ್ಯಕತೆ ಇದೆ. ಪ್ರಸ್ತುತ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಈ ಎಲ್ಲಾ ಪದವಿ ಕಾಲೇಜುಗಳನ್ನು ವಿಜಯಪುರ ನಗರದಲ್ಲಿ ಹೊಸದಾಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಿ, ಅದರ ವ್ಯಾಪ್ತಿಗೆ ತರುವುದು ಅತಿ ಜರೂರಾಗಿರುವ ಈ ವಿಚಾರವನ್ನು ಈ ಸದನದ ಮೂಲಕ ಶೂನ್ಯ ವೇಳೆಯಲ್ಲಿ ಸರ್ಕಾರದವನ್ನು ಒತ್ತಾಯಿಸುತ್ತೇನೆ.

**ಉತ್ತರ :**

ಬೆಳಗಾವಿಯಲ್ಲಿ ಕೇಂದ್ರ ಸ್ಥಾನವನ್ನು ಹೊಂದಿರುವ ಮತ್ತು ಬೆಳಗಾವಿ ಹಾಗೂ ವಿಜಯಪುರ ಜಿಲ್ಲೆಗಳ ಪ್ರದೇಶದ ಮೇಲೆ ಪ್ರಾದೇಶಿಕ ಅಧಿಕಾರ ಕ್ಷೇತ್ರ ವ್ಯಾಪ್ತಿಯನ್ನು ಹೊಂದಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಸುಸಜ್ಜಿತ ಆಡಳಿತ ವ್ಯವಸ್ಥೆ ಹಾಗೂ ಸಂಪನ್ಮೂಲ ಹೊಂದಿರುವ ವಿಶ್ವವಿದ್ಯಾಲಯವಾಗಿರುತ್ತದೆ.

...2

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕೇಂದ್ರ ಸ್ಥಾನವಾಗಿರುವ ಬೆಳಗಾವಿಯಿಂದ ದೂರದಲ್ಲಿರುವ ವಿಜಯಪುರ ಜಿಲ್ಲೆ ಹಾಗೂ ತಾಲ್ಲೂಕುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಒತ್ತಾಸೆಯನ್ನು ವಿಜಯಪುರ ಜಿಲ್ಲೆಯ ತೊರವಿಯಲ್ಲಿರುವ ಸ್ನಾತಕೋತ್ತರ ಕೇಂದ್ರವು ಸಮರ್ಪಕವಾಗಿ ಈಡೇರಿಸುತ್ತಿರುವುದರಿಂದ ಹಾಗೂ ವಿಜಯಪುರ ಜಿಲ್ಲೆಯಲ್ಲಿ ಈಗಾಗಲೇ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯವು ಸಹ ಇರುವುದರಿಂದ ವಿಜಯಪುರ ಜಿಲ್ಲೆಗೆ ಪ್ರತ್ಯೇಕವಾಗಿ ಮತ್ತೊಂದು ವಿಶ್ವವಿದ್ಯಾಲಯ ಸ್ಥಾಪಿಸುವ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತುತ ಪರಿಶೀಲನೆ ಹಂತದಲ್ಲಿರುತ್ತದೆ.

**ಸಂಖ್ಯೆ : ಇಡಿ/109/ಯುಆರ್‌ಸಿ/2023**

**(ಡಾ. ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ – ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು